**All India Radio: Bangalore**
**National Bulletin In Kannada**
**15.07.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ದೇಶದ ಸೆಮಿಕಂಡಕ್ಟರ್ ವಿನ್ಯಾಸ, ಉತ್ಪಾದ ಪರಿಸರ ವ್ಯವಸ್ಥೆ ಬಲಪಡಿಸಲು 'ಸೆಮಿಕಾನ್ ೨.೦' ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
2. ಭಾರತ-ಬ್ರಿಟನ್ ಸಮಗ್ರ ಆರ್ಥಿಕ-ವ್ಯಾಪಾರ ಒಪ್ಪಂದ ಇಂದಿನಿಂದ ಜಾರಿಗೆ; ಮೊದಲ ದಿನ ಭಾರತದಿಂದ ೧೪೦ ದಶಲಕ್ಷ ಮೌಲ್ಯದ ಸರಕುಗಳು ಬ್ರಿಟನ್‌ಗೆ ರಫ್ತು
3. ಇರಾನ್ ಮೇಲೆ ಪುನಃ ನೌಕಾ ದಿಗ್ಬಂಧನ ಹೇರಿದ ಅಮೆರಿಕ
4. ಫಿಫಾ ವಿಶ್ವಕಪ್ ಫುಟ್‌ಬಾಲ್: ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಅರ್ಜೆಂಟೀನಾ-ಇಂಗ್ಲೆಂಡ್ ಮುಖಾಮುಖಿ

<><><><>

ಉತ್ತರ ಪ್ರದೇಶದ ವಾರಣಾಸಿ ರಿಂಗ್ ರಸ್ತೆ ಮತ್ತು ರಾಷ್ಟ್ರೀಯ ಹೆದ್ದಾರಿ-೧೯ ನಡುವೆ ೪೬ ಕಿಲೋಮೀಟರ್‌ಗಳಿಗೂ ಹೆಚ್ಚು ಉದ್ದದ ೬-ಪಥದ ಗ್ರೀನ್‌ಫೀಲ್ಡ್ ಎಲಿವೇಟೆಡ್ ಕಾರಿಡಾರ್ ಅನ್ನು ಕೇಂದ್ರ ಸಚಿವ ಸಂಪುಟ ಇಂದು ಅನುಮೋದಿಸಿದೆ. ಈ ಕುರಿತು ನವದೆಹಲಿಯಲ್ಲಿ ಇಂದು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಯೋಜನೆಯ ಒಟ್ಟು ಬಂಡವಾಳ ವೆಚ್ಚ ೧೪ ಸಾವಿರದ ೪ ನೂರು ಕೋಟಿ ರೂಪಾಯಿಗಳಿಗಿಂತ ಹೆಚ್ಚಿದ್ದು, ರಾಷ್ಟ್ರೀಯ ಹೆದ್ದಾರಿ-೧೯ ಮತ್ತು ವಾರಣಾಸಿ ರಿಂಗ್ ರಸ್ತೆ ನಡುವೆ ತಡೆರಹಿತ ಸಂಪರ್ಕವನ್ನು ಒದಗಿಸುತ್ತದೆ. ಇದು ನಗರ ಚಲನಶೀಲತೆಯನ್ನು ಸುಧಾರಿಸುತ್ತದೆ. ಯೋಜನೆಯು ಸರಾಸರಿ ಪ್ರಯಾಣದ ಸಮಯವನ್ನು ಸುಮಾರು ೬೦ ನಿಮಿಷಗಳಿಂದ ೨೦ ನಿಮಿಷಗಳಿಗೆ ಇಳಿಸುವ ನಿರೀಕ್ಷೆಯಿದೆ ಎಂದು ಹೇಳಿದರು. ಭಾರತದ ಸೆಮಿಕಂಡಕ್ಟರ್ ವಿನ್ಯಾಸ ಮತ್ತು ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ೧ ಲಕ್ಷ ೨೬ ಸಾವಿರ ೫೦೦ ಕೋಟಿ ರೂಪಾಯಿಗಳ ವೆಚ್ಚದೊಂದಿಗೆ 'ಸೆಮಿಕಾನ್ ೨.೦' ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಈ ಯೋಜನೆಯು ಆರ್ಥಿಕ ಬೆಳವಣಿಗೆಯನ್ನು ಬೆಂಬಲಿಸುತ್ತದೆ, ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸುತ್ತದೆ ಮತ್ತು ನಿರ್ಣಾಯಕ ವಲಯಗಳಲ್ಲಿ ತಾಂತ್ರಿಕ ನಾಯಕತ್ವವನ್ನು ಸ್ಥಾಪಿಸುತ್ತದೆ ಎಂದು ಅವರು ಹೇಳಿದರು. ೬೨ ಸಾವಿರದ ೫೦೦ ಕೋಟಿ ರೂಪಾಯಿಗಳ ವೆಚ್ಚದ ಮೊಬೈಲ್ ಫೋನ್ ಉತ್ಪಾದನಾ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಮುಂದಿನ ೫ ವರ್ಷಗಳವರೆಗೆ ಈ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು. ಒಡಿಶಾ ಮತ್ತು ಜಾರ್ಖಂಡ್‌ನಾದ್ಯಂತ ನಾಲ್ಕು ಜಿಲ್ಲೆಗಳನ್ನು ಒಳಗೊಂಡ ಎರಡು ಮಲ್ಟಿಟ್ರ್ಯಾಕಿಂಗ್ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಯೋಜನೆಯು ಒಡಿಶಾದಲ್ಲಿ ಪರದೀಪ್-ಹರಿದಾಸ್ಪುರ್ ಡಬಲ್ ಟ್ರ್ಯಾಕ್ ಮತ್ತು ಜಾರ್ಖಂಡ್‌ನಲ್ಲಿ ರಾಜ್‌ಖರ್ಸವಾನ್-ದಂಗೋಪೋಸಿ ಟನೇ ಮಾರ್ಗವನ್ನು ಒಳಗೊಂಡಿದೆ. ಸುಮಾರು ೩ ಸಾವಿರದ ೯೦೬ ಕೋಟಿ ರೂಪಾಯಿಗಳ ಒಟ್ಟು ಅಂದಾಜು ವೆಚ್ಚದೊಂದಿಗೆ, ಯೋಜನೆ ೨೦೩೦-೩೧ ರ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಅವರು ಮಾಹಿತಿ ನೀಡಿದರು. ಆತ್ಮನಿರ್ಭರ ಭಾರತಕ್ಕಾಗಿ ಯೂರಿಯಾ-೨೦೨೬ ರ ರಾಷ್ಟ್ರೀಯ ಹೂಡಿಕೆ ನೀತಿಯನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ದೇಶದಲ್ಲಿ ಅನಿಲ ಆಧಾರಿತ ಯೂರಿಯಾ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಯೂರಿಯಾ ವಲಯದಲ್ಲಿ ಹೊಸ ಹೂಡಿಕೆಗಳನ್ನು ಪ್ರೋತ್ಸಾಹಿಸಲು ಈ ನೀತಿಯು ಪ್ರಯತ್ನಿಸುತ್ತದೆ. ಇದು ಸ್ವಾವಲಂಬನೆಯ ಗುರಿಯನ್ನು ಸಾಧಿಸಲು ಸಹಾಯ ಮಾಡುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<><><><>

ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಇಂದು ಜಾರಿಗೆ ಬಂದಿದ್ದು, ಮೊದಲ ದಿನದಂದು ಭಾರತದಿಂದ ೧೪೦ ದಶಲಕ್ಷ ಮೌಲ್ಯದ ಸರಕುಗಳನ್ನು ಬ್ರಿಟನ್‌ಗೆ ರಫ್ತು ಮಾಡಲಾಗುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ತಿಳಿಸಿದ್ದಾರೆ. ಕರ್ನಾಟಕದಲ್ಲಿ, ಬ್ರಿಟನ್ ಡೆಪ್ಯುಟಿ ಹೈಕಮಿಷನರ್ ಚಂದ್ರು ಅಯ್ಯರ್ ಬೆಂಗಳೂರಿನಲ್ಲಿ ರಫ್ತು ಸಾಗಣೆಗೆ ಚಾಲನೆ ನೀಡಿದರು. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಎರಡೂ ದೇಶಗಳ ಸರಕುಗಳಿಗೆ ಆದ್ಯತೆಯ ಸುಂಕಗಳು ದೊರೆಯಲಿದ್ದು, ಇದು ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಹೇಳಿದರು. ಹೈದರಾಬಾದ್‌ನಲ್ಲಿ, ತೆಲಂಗಾಣದಿಂದ ಬ್ರಿಟನ್‌ಗೆ ರಫ್ತು ಸಾಗಣೆಗೆ ಇಂದು ಚಾಲನೆ ನೀಡಲಾಯಿತು. ಪಂಜಾಬ್‌ನ ಅಮೃತಸರ ಮತ್ತು ಲುಧಿಯಾನದಿಂದ ಸಿದ್ಧ ಉಡುಪುಗಳು ಮತ್ತು ಉಣ್ಣೆ ಮತ್ತು ವರ್ಸ್ಟೆಡ್ ನೂಲುಗಳ ರಫ್ತಿಗೆ ಹಸಿರು ನಿಶಾನೆ ತೋರಲಾಯಿತು. ಮಹಾರಾಷ್ಟ್ರದ ಮುಂಬೈನಲ್ಲಿ ರಫ್ತು ಸಾಗಣೆಗೆ ಚಾಲನೆ ನೀಡಲಾಯಿತು. ರಾಸಾಯನಿಕಗಳು, ಔಷಧಗಳು, ಪ್ಲಾಸ್ಟಿಕ್‌ಗಳು, ಆಹಾರ ಉತ್ಪನ್ನಗಳು ಮತ್ತು ಮಸಾಲೆಗಳು ಸೇರಿದಂತೆ ವಿವಿಧ ಸರಕುಗಳ ರಫ್ತಿಗೆ ಹಸಿರು ನಿಶಾನೆ ತೋರಲಾಯಿತು.

<><><><>

ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಹಾಗೂ ಸಾಮಾಜಿಕ ಭದ್ರತೆಯ ಒಪ್ಪಂದದ ಅನುಷ್ಠಾನ, ಭಾರತ ಮತ್ತು ಬ್ರಿಟನ್ ನಡುವಿನ ಶಾಶ್ವತ ಪಾಲುದಾರಿಕೆಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಒಪ್ಪಂದಗಳು ಮಾರುಕಟ್ಟೆ ಪ್ರವೇಶವನ್ನು ಗಮನಾರ್ಹವಾಗಿ ವಿಸ್ತರಿಸುತ್ತವೆ, ವ್ಯಾಪಾರ ಮತ್ತು ಸೇವೆಗಳನ್ನು ಬಲಪಡಿಸುತ್ತವೆ ಹಾಗೂ ವೃತ್ತಿಪರರಿಗೆ ಹೆಚ್ಚಿನ ಚಲನಶೀಲತೆಯನ್ನು ಸುಗಮಗೊಳಿಸುತ್ತವೆ ಎಂದು ತಿಳಿಸಿದ್ದಾರೆ. ಇದು ದೇಶದ ಉದ್ಯಮಿಗಳು, ರೈತರು, ತಯಾರಕರು, ಎಂಎಸ್‌ಎಂಇ ಗಳು ಮತ್ತು ಕೌಶಲ್ಯಪೂರ್ಣ ವೃತ್ತಿಪರರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತದೆ. ಜವಳಿ, ಚರ್ಮ, ರತ್ನಗಳು ಮತ್ತು ಆಭರಣಗಳು, ಎಂಜಿನಿಯರಿಂಗ್ ಸರಕುಗಳು, ಸಮುದ್ರ ಉತ್ಪನ್ನಗಳು, ರಾಸಾಯನಿಕಗಳು ಮತ್ತು ಸಂಸ್ಕರಿಸಿದ ಆಹಾರಗಳಂತಹ ಕ್ಷೇತ್ರಗಳಿಗೆ ಅಪಾರ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಅವರು ಹೇಳಿದ್ದಾರೆ. ಭಾರತ-ಬ್ರಿಟನ್ ಸಂಬಂಧಗಳಲ್ಲಿನ ಈ ಹೊಸ ಅಧ್ಯಾಯವು ಹಂಚಿಕೆಯ ಸಮೃದ್ಧಿ, ನಾವೀನ್ಯತೆ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡುತ್ತದೆ ಮತ್ತು ಎರಡೂ ರಾಷ್ಟ್ರಗಳ ನಡುವಿನ ಸ್ನೇಹದ ಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ಇಂದು ಜಾರಿಗೆ ಬಂದಿರುವ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಮತ್ತು ಸಾಮಾಜಿಕ ಭದ್ರತೆಯ ಒಪ್ಪಂದವು ಭಾರತ-ಬ್ರಿಟನ್ ನಡುವಿನ ಪಾಲುದಾರಿಕೆಯಲ್ಲಿ ಮಹತ್ವದ ಕ್ಷಣವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರ ಪೋಸ್ಟ್ ಅನ್ನು ಪ್ರಧಾನಿ ಹಂಚಿಕೊಂಡಿದ್ದಾರೆ. ಬ್ರಿಟನ್ ಮಾರುಕಟ್ಟೆಗೆ ಬಲವಾದ ಪ್ರವೇಶವನ್ನು ಪಡೆಯುವ ಹಲವಾರು ಚೈತನ್ಯಶೀಲ ವಲಯಗಳೊಂದಿಗೆ ಭಾರತದ ರೈತರು, ಉದ್ಯಮಿಗಳು ಮತ್ತು ಎಂಎಸ್‌ಎಂಇ ಗಳಿಗೆ ಹೊಸ ಆವೇಗವನ್ನು ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದು ತಂತ್ರಜ್ಞಾನ, ವೃತ್ತಿಪರ ಸೇವೆಗಳು ಮತ್ತು ನಾವೀನ್ಯತೆಯಲ್ಲಿ ಸಹಕಾರವನ್ನು ಗಾಢವಾಗಿಸುತ್ತದೆ ಹಾಗೂ ಕೌಶಲ್ಯಪೂರ್ಣ ಭಾರತೀಯ ಪ್ರತಿಭೆಗಳಿಗೆ ಹೆಚ್ಚಿನ ಚಲನಶೀಲತೆಯನ್ನು ಬೆಂಬಲಿಸುತ್ತದೆ ಎಂದರು. ಸಾಮಾಜಿಕ ಭದ್ರತಾ ಒಪ್ಪಂದವು ಬ್ರಿಟನ್‌ನಲ್ಲಿ ತಾತ್ಕಾಲಿಕವಾಗಿ ಕೆಲಸ ಮಾಡುವ ಭಾರತೀಯ ವೃತ್ತಿಪರರಿಗೆ ಅಮೂಲ್ಯವಾದ ಬೆಂಬಲವನ್ನು ನೀಡುತ್ತದೆ ಮತ್ತು ಭಾರತೀಯ ಉದ್ಯಮಗಳ ಸ್ಪರ್ಧಾತ್ಮಕತೆಯನ್ನು ಬಲಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><><>

ಇಂದು ಜಾರಿಗೆ ಬಂದಿರುವ ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಅವರು, ಜವಳಿ, ಚರ್ಮ, ಎಂಜಿನಿಯರಿಂಗ್, ಆಹಾರ ಸಂಸ್ಕರಣೆ, ಔಷಧಗಳು ಮತ್ತು ಎಂಎಸ್‌ಎಂಇ ಸೇರಿದಂತೆ ಭಾರತೀಯ ರಫ್ತಿನ ೯೯ ಪ್ರತಿಶತಕ್ಕೆ ಶೂನ್ಯ-ಸುಂಕ ಮಾರುಕಟ್ಟೆ ಪ್ರವೇಶ ನೀಡುತ್ತದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಎತ್ತಿಹಿಡಿಯುವ ಜನಪರ ರಾಜತಾಂತ್ರಿಕತೆಯ ದೃಷ್ಟಿಕೋನಕ್ಕೆ ಈ ಒಪ್ಪಂದ ಸಾಕ್ಷಿಯಾಗಿದೆ. ಈ ಒಪ್ಪಂದವು ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಬಲಪಡಿಸುವಾಗ ಬ್ರಿಟನ್‌ನಲ್ಲಿರುವ ಭಾರತೀಯ ವೃತ್ತಿಪರರಿಗೆ ಗಮನಾರ್ಹ ವಿನಾಯಿತಿಗಳನ್ನು ವಿಸ್ತರಿಸುತ್ತದೆ ಎಂದು ಸಚಿವ ಅಮಿತ್ ಶಾ ತಿಳಿಸಿದ್ದಾರೆ.

<><><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ಬೆಲ್ಜಿಯಂನ ಬ್ರಸೆಲ್ಸ್‌ನಲ್ಲಿ ಐರೋಪ್ಯ ಒಕ್ಕೂಟದ ಸ್ಟಾರ್ಟ್‌ಅಪ್‌ಗಳು, ಸಂಶೋಧನೆ ಮತ್ತು ನಾವೀನ್ಯತೆ ಆಯುಕ್ತೆ ಎಕಟೆರಿನಾ ಜಹರಿವಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಭೆಯಲ್ಲಿ, ಶುದ್ಧ ಮತ್ತು ಹಸಿರು ಇಂಧನ ತಂತ್ರಜ್ಞಾನಗಳಲ್ಲಿ ಸಂಶೋಧನೆಗೆ ಅವಕಾಶಗಳ ಕುರಿತು ಚರ್ಚಿಸಿದರು. ನಾವೀನ್ಯತೆ ಕೇಂದ್ರಗಳು, ಸ್ಟಾರ್ಟ್‌ಅಪ್‌ಗಳು ಮತ್ತು ವಿವಿಧ ವಿಷಯಗಳ ಕುರಿತು ಪರಸ್ಪರ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಬೆಲ್ಜಿಯಂಗೆ ತಮ್ಮ ಎರಡು ದಿನಗಳ ಅಧಿಕೃತ ಭೇಟಿಯಲ್ಲಿರುವ ಡಾ. ಜೈಶಂಕರ್, ಬ್ರಸೆಲ್ಸ್‌ನಲ್ಲಿ ನಡೆದ ಭಾರತ-ಬೆಲ್ಜಿಯಂ ಕಾರ್ಯತಂತ್ರದ ಸಂವಾದವನ್ನು ಬೆಲ್ಜಿಯಂ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಮ್ಯಾಕ್ಸಿಮ್ ಪ್ರೆವೊಟ್ ಅವರೊಂದಿಗೆ ಸಹ-ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ರಾಜಕೀಯ, ಆರ್ಥಿಕ, ಹೂಡಿಕೆಗಳು, ಶುದ್ಧ ಇಂಧನ, ರಕ್ಷಣೆ, ಚಲನಶೀಲತೆ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ಸಹಕಾರವನ್ನು ಪರಿಶೀಲಿಸಿದರು. ಪಶ್ಚಿಮ ಏಷ್ಯಾ ಸೇರಿದಂತೆ ಜಾಗತಿಕ ಬೆಳವಣಿಗೆಗಳ ಕುರಿತು ಎರಡೂ ಕಡೆಯವರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

<><><><>

ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗಲು ಪ್ರಯತ್ನಿಸುತ್ತಿರುವ ಹಡಗುಗಳ ಮೇಲೆ ಇರಾನ್ ನಡೆಸಿದ ದಾಳಿಗೆ ಪ್ರತೀಕಾರವಾಗಿ ಅಮೆರಿಕ, ಇರಾನ್ ಮೇಲೆ ಪುನಃ ನೌಕಾ ದಿಗ್ಬಂಧನ ಹೇರಿದೆ ಹಾಗೂ ಇಂದು ತನ್ನ ವೈಮಾನಿಕ ದಾಳಿಯನ್ನು ತೀವ್ರಗೊಳಿಸಿದೆ. ಇರಾನಿನ ಸೇನಾ ಬ್ಯಾರಕ್‌ಗಳ ಮೇಲೆ ಅಮೆರಿಕ ದಾಳಿ ನಡೆಸಿದ್ದು, ಕನಿಷ್ಠ ಏಳು ಸೈನಿಕರು ಹುತಾತ್ಮರಾಗಿದ್ದಾರೆ. ಅಲ್ಲದೇ ದೇಶಾದ್ಯಂತ ೨೬೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಅಮೆರಿಕ ದಾಳಿಯಿಂದಾಗಿ ೩೦ ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ಇರಾನ್ ಸರ್ಕಾರದ ವಕ್ತಾರ ಫಾತಿಮೆಹ್ ಮೊಹಜೆರಾನಿ ತಿಳಿಸಿದ್ದಾರೆ. ಪುನಃ ದಿಗ್ಬಂಧನ ಹೇರುತ್ತಿದ್ದಂತೆ ಅಮೆರಿಕ ಮತ್ತು ಇರಾನ್ ಪರಸ್ಪರ ದಾಳಿಗಳನ್ನು ಪ್ರಾರಂಭಿಸಿವೆ. ದಿಗ್ಬಂಧನದ ಕಾರಣದಿಂದಾಗಿ ಇರಾನ್, ಪಶ್ಚಿಮ ಏಷ್ಯಾದಿಂದ ಎಲ್ಲಾ ಇಂಧನ ರಫ್ತುಗಳನ್ನು ನಿಲ್ಲಿಸುವುದಾಗಿ ಬೆದರಿಕೆ ಹಾಕಿದೆ.

<><><><>

ಅಟ್ಲಾಂಟಾದಲ್ಲಿ ಇಂದು ಮಧ್ಯರಾತ್ರಿ ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಅರ್ಜೆಂಟೀನಾ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧೨.೩೦ಕ್ಕೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ, ಫೈನಲ್ ಪಂದ್ಯದಲ್ಲಿ ಸ್ಪೇನ್ ತಂಡದ ವಿರುದ್ಧ ಪ್ರಶಸ್ತಿಗಾಗಿ ಸೆಣಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>